12	Dakshina Kannada	1	8655	1000
15	Gadag	1	68.5	28
16	Gulbarga	8	7834.45	2439
17	Hassan	2	2096.21	1205
18	Haveri	2	2005	1077
20	Kolar	1	103.01	205
21	Koppal	4	1096.43	1501
22	Mandya	1	92.42	1025
23	Mysore	6	1657.76	12530
24	Raichur	2	7966.4	2787
25	Ramanagara	3	803.83	3612
26	Shimoga	1	104.94	220
27	Tumkur	3	1990	3500
28	Udupi	1	280	205
29	Uttara Kannada	2	7600	715
	Many Districts	2	11340	2770
		76	**190237.44**	**184611**

ಪರವಾನಗಿ ಆಧಾರದ ಮೇಲಿನ ಭೂಮಾಪಕರು

696 (1221) ಶ್ರೀ ಶಿವಲಿಂಗೇಗೌಡ ಕೆ.ಎಂ. (ಅರಸೀಕೆರೆ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕ ರಾಜ್ಯದಲ್ಲಿ ಪರವಾನಗಿ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿರುವ ಭೂಮಾಪಕರ ಸಂಖ್ಯೆ ಎಷ್ಟು?

ಆ) ಸದರಿ ಪರವಾನಗಿ ಭೂಮಾಪಕರಿಗೆ ಪ್ರತಿ ಮಾಹೆಗೆ ನೀಡುತ್ತಿರುವ ಭೂಮಾಪನ ಪ್ರಕರಣಗಳು ಎಷ್ಟು?

ಶ್ರೀ ಜಿ. ಕರುಣಾಕರ ರೆಡ್ಡಿ (ಕಂದಾಯ ಸಚಿವರು) :

ಅ) ರಾಜ್ಯದಲ್ಲಿ ಪರವಾನಗಿ ಭೂಮಾಪಕರ ಯೋಜನೆಯಡಿ ಕಾರ್ಯನಿರ್ವಹಿಸುತ್ತಿರುವ ಭೂಮಾಪಕರ ಸಂಖ್ಯೆ 2423.

ಅ) ರಾಜ್ಯದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪರವಾನಗಿ ಭೂಮಾಪಕರುಗಳಿಗೆ ಪ್ರತಿ ಮಾಹೆ 2 ರಿಂದ 25 ರವರೆಗೆ ಸರಾಸರಿ 10 ಪ್ರಕರಣಗಳು ದೊರೆಯುತ್ತಿವೆ.

ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳು

697 (1238) ಶ್ರೀ ಶಿವಶಂಕರ ರೆಡ್ಡಿ ಎನ್.ಎಚ್. (ಗೌರಿಬಿದನೂರು) : ಮಾನ್ಯ ಜವಳಿ, ಯುವಜನಸೇವೆ ಮತ್ತು ಕ್ರೀಡಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಸಿದ್ದ ಉಡುಪುಗಳ ಸಮುಚ್ಛಯವನ್ನು ಪ್ರಾರಂಭಿಸಲು ಯೋಜಿಸಲಾಗಿರುವುದು ನಿಜವೇ ಆದರೆ, ಇದುವರೆವಿಗೂ ಕಾರ್ಯಾರಂಭ ಮಾಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಗೌರಿಬಿದನೂರಿನಲ್ಲಿ ಕೆ.ಐ.ಎ.ಡಿ.ಬಿ ವತಿಯಿಂದ ಸುಮಾರು 250 ಎಕರೆ ಜಮೀನು ಖರೀದಿಸಲಾಗಿದ್ದು, ಸಿದ್ಧ ಉಡುಪುಗಳ ಸಮುಚ್ಛಯವನ್ನು ಪ್ರಾರಂಭಿಸಲು ಸರ್ಕಾರ ಚಿಂತಿಸಿದೆಯೇ?

ಶ್ರೀ ಗೂಳಿಹಟ್ಟಿ ಡಿ. ಶೇಖರ್ (ಜವಳಿ, ಯುವಜನ ಸೇವ ಹಾಗೂ ಕ್ರೀಡಾ ಸಚಿವರು) :

ಅ) ಹೌದು.

ಆ) ಈ ರೀತಿಯ ಪ್ರಸ್ತಾವನೆ ಇರುವುದಿಲ್ಲ.

ಮೈಸೂರು ಜಿಲ್ಲೆಯಲ್ಲಿ ಭೂಸ್ವಾಧೀನ

698 (546) ಶ್ರೀ ಶ್ರೀನಿವಾಸ್. ಎಂ (ಮಂಡ್ಯ) : ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೆ.ಐ.ಎ.ಡಿ.ಬಿ ಯವರು ಮೈಸೂರು ಜಿಲ್ಲೆ, ಮೈಸೂರು ತಾಲ್ಲೂಕಿನ ಇಲವಾಲ ಹೋಬಳಿ, ಮೈದನಹಳ್ಳಿ ಇಲವಾಲ ಮತ್ತು ಕೂರ್ಗಹಳ್ಳಿ ಗ್ರಾಮಗಳಲ್ಲಿ ವಶಕ್ಕೆ ತೆಗೆದುಕೊಂಡಿರುವ ಜಮೀನಿನ ಒಟ್ಟು ವಿಸ್ತೀರ್ಣವೆಷ್ಟು (ಮಾಹಿತಿ ನೀಡುವುದು)?